# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 763 |
| ಮಾನ್ಯ ಸದಸ್ಯರ ಹೆಸರು: | ಡಾ: ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 16-12-2024 |
| ಉತ್ತರಿಸುವ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಹಟ್ಟಿ ಪಟ್ಟಣದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ:-ಆಕುಕ 391 ಸಿಜಿಇ 2022, ದಿನಾಂಕ:-27-09-2024 ಮತ್ತು ತಿದ್ದುಪಡಿ ಆದೇಶ ದಿನಾಂಕ: 22-10-2024 ರಲ್ಲಿ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 30 ಹಾಸಿಗೆಯ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಲಾಗಿದೆ. |
| ಆ | ಇದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು; ಲಿಂಗಸೂರು ತಾಲ್ಲೂಕಿನ ನಾಗರಾಳ ಗ್ರಾಮವು ಅತಿ ಹೆಚ್ಚು ಜನ ಸಂಖ್ಯೆ ಹೊಂದಿದ್ದು ಅದರ ಸುತ್ತ ಮುತ್ತಲು ಅನೇಕ ಹಳ್ಳಿಗಳಿದ್ದು ಪಕ್ಕದಲ್ಲಿ ನಾರಾಯಣಪುರ ಜಲಾಶಯವಿರುವುದರಿಂದ ಆ ಜಲಾಶಯದ ಹಿನ್ನೀರಿನಿಂದ ಅನೇಕ ಸಾಂಕ್ರಾಮಿಕ ರೋಗಗಳು ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ನಾಗರಾಳ ಗ್ರಾಮದ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಫಾಗಿಂಗ್ ಮಾಡಿಸಲಾಗಿದ್ದು, ಹೆಚ್ಚಿನ ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ನಿಯೋಜಿಸಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ. |
| ಇ | ಬಂದಿದ್ದಲ್ಲಿ ನಾಗರಾಳ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಕಿಯೇ ಬಗ್ಗೆ ಸರ್ಕಾರ ಕೈ ಗೊಂಡಿರುವ ಕ್ರಮಗಳೇನು; | 2027ರ ಪರಿಷ್ಕೃತ ಯೋಜಿತ ಜನ ಸಂಖ್ಯೆಯನ್ವಯ ಲಿಂಗಸುಗೂರು ತಾಲ್ಲೂಕಿನ ಗ್ರಾಮೀಣ ಜನ ಸಂಖ್ಯೆ:- 3,49,616 ಇದ್ದು, 3 ಸಮುದಾಯ ಆರೋಗ್ಯ ಕೇಂದ್ರ ಸ್ಥಾಪಿಸಲು ಅವಕಾಶವಿದ್ದು, ಪ್ರಸ್ತುತ ಮೂರು (1.ಮುದಗಲ್, 2.ಅನಹೊಸೂರು 3.ಹಟ್ಟಿ) |

| | | |
|---|---|---|
| | | ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.<br><br>IPHS ಮಾನದಂಡಗಳನ್ವಯ ಹೊಸ ಸಮುದಾಯ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಅವಕಾಶವಿರುವುದಿಲ್ಲ. |
| ಈ | ಈ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯರು ಹಾಗೂ ಸಿಬ್ಬಂದಿಗಳು ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಕೈಗೊಂಡ ಕ್ರಮಗಳೇನು? | ಪ್ರಸ್ತುತ ಎನ್.ಹೆಚ್.ಎಂ ಯೋಜನೆ ಅಡಿಯಲ್ಲಿಆಯುಷ್ ವೈದ್ಯರು ಪ್ರಾಥಮಿಕ ಆರೋಗ್ಯ ಕೇಂದ್ರ ನಾಗರಾಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಆಯುಷ್ ವೈದ್ಯಕೀಯ ಪದ್ಧತಿಯ ಅನುಸಾರ ಆಯುಷ್ ಇಲಾಖೆಯಿಂದ ಅವರಿಗೆ ಅವಶ್ಯಕತೆ ಇರುವ ಔಷಧಿಗಳನ್ನು ಸರಬರಾಜು ಮಾಡಲಾಗುತ್ತಿದೆ ಹಾಗೂ ಗುತ್ತಿಗೆ ಎಂ.ಬಿ.ಬಿ.ಎಸ್ ವೈದ್ಯರನ್ನು ನೇಮಕ ಮಾಡುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಹಾಗೂ ಗ್ರೂಪ್ ಡಿ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಮಾಡಲಾಗಿದೆ. |

**ಆಕುಕ 140 ಎಸ್‌ಬಿವಿ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**